# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** **ಶ್ರೀ ಪ್ರಭು ಸಿ ಮಾನೆ,** ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಜೇವರ್ಗಿ (ಮೂಲತಃ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧಿಕಾರಿ) ಇವರ ವಿರುದ್ಧ ಶಿಸ್ತುಕ್ರಮ-ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕಲಬುರಗಿ ಇವರ ಪತ್ರ ಸಂಖ್ಯೆ:ಜಿಪಕ/ಆಡಳಿತ/ಪ.ಕ/ದೂರು/76/ 2018-19/253, ದಿನಾಂಕ:16.05.2022.
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 119 ವಿಸೇಬಿ 2020, ದಿನಾಂಕ:19.05.2022.
3. ಆಪಾದಿತ ಅಧಿಕಾರಿಯ ಲಿಖಿತ ಹೇಳಿಕೆ ದಿನಾಂಕ:25.05.2022.

-000-

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಕಲಬುರುಗಿ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲೆ ಕ್ರಮ ಸಂಖ್ಯೆ:(01)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ **ಶ್ರೀ ಪ್ರಭು ಸಿ ಮಾನೆ, ಮುಖ್ಯ** ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಇವರು ಈ ಹಿಂದೆ ತಾಲ್ಲೂಕು ಪಂಚಾಯಿತಿ, ಜೇವರ್ಗಿ ಇಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ, ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಜೇವರ್ಗಿ ಪಟ್ಟಣದ ಹಳೆ ಬಸ್ ನಿಲ್ದಾಣದಲ್ಲಿರುವ ಶೌಚಾಲಯದ ಬಾಡಿಗೆಯಿಂದ ಬಂದ ರಾಜಸ್ವ ಹಣವನ್ನು ತಾಲ್ಲೂಕು ಪಂಚಾಯತಿಯ ನಿಧಿ-3ಕ್ಕೆ ಜಮೆ ಮಾಡದೇ ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಎಸ್.ಬಿ.ಐ, ಬ್ಯಾಂಕ್, ಜೇವರ್ಗಿ ಶಾಖೆಯ ಖಾತೆ ಸಂಖ್ಯೆ:30856453443ರಲ್ಲಿ ನಿರ್ವಹಿಸಿರುವ ಹಾಗೂ ಸದರಿ ತಾಲ್ಲೂಕು ಪಂಚಾಯಿತಿಯ ರಾಜಸ್ವ ಮೊತ್ತವನ್ನು ಖರ್ಚು ಮಾಡಲು ಜಂಟಿ ಸಹಿಯೊಂದಿಗೆ ಧನಾದೇಶ ಪಡೆದು ಹಣ ಸೆಳೆಯಬೇಕೆಂದು ನಿಯಮವಿದ್ದರೂ ಸಹ ಒಬ್ಬರೇ ಸ್ವಂತ ಬ್ಯಾಂಕ್ ಹುಂಡಿಯ ಮೇಲೆ ರುಜು ಮಾಡಿ ಹಣ ಸೆಳೆದಿರುವ ಮತ್ತು ಇನ್ನಿತರೆ **03** ಆರೋಪಗಳಿಗೆ ಸಂಬಂಧಿಸಿದಂತೆ ಕರ್ತವ್ಯಲೋಪವೆಸಗಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಆರೋಪಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿ ಕರಡು ದೋಷಾರೋಪಣಾ ಪಟ್ಟಿ ಮತ್ತು ಪೂರಕ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸರ್ಕಾರದಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಆಪಾದಿತರ ವಿರುದ್ಧದ ಆರೋಪಗಳು ಗಂಭೀರ ಸ್ವರೂಪದ್ದಾಗಿದ್ದು, ಸದರಿ ಅಧಿಕಾರಿಯು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ

--2

ಕರ್ನಾಟಕ ನಾಗರೀಕ ಸೇವಾ (ವ.ನಿ&ಮೇ) ನಿಯಮಗಳು 1957ರ ನಿಯಮ-11 ರಡಿಯಲ್ಲಿ ದೋಷಾರೋಪಣಾ ಪಟ್ಟಿಯೊಂದಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ:02ರಲ್ಲಿನ ಕಾರಣ ಕೇಳುವ ನೋಟಿಸ್ ಜಾರಿ ಮಾಡಿ ಸಮಜಾಯಿಷಿ ಏನಾದರೂ ಇದ್ದಲ್ಲಿ ಲಿಖಿತ ಮೂಲಕ ಸಲ್ಲಿಸುವಂತೆ ಸೂಚಿಸಲಾಗಿತ್ತು.

ಆಪಾದಿತರಾದ **ಶ್ರೀ ಪ್ರಭು ಸಿ ಮಾನೆ, ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಬಾಗಲಕೋಟೆ ಇವರು** ಸರ್ಕಾರದ ಕಾರಣ ಕೇಳುವ ನೊಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ:03ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ತಮ್ಮ ವಿರುದ್ಧದ ಆರೋಪವನ್ನು ನಿರಾಕರಿಸಿ, ತಮ್ಮನ್ನು ದೋಷಾರೋಪ ಮುಕ್ತಗೊಳಿಸುವಂತೆ ಕೋರಿರುತ್ತಾರೆ.

ಸರ್ಕಾರವು ಆಪಾದಿತರ ವಿರುದ್ಧದ ಆರೋಪಗಳು ಮತ್ತು ಅವರು ಸರ್ಕಾರದ ಕಾರಣ ಕೇಳುವ ನೊಟೀಸಿಗೆ ನೀಡಿರುವ ಲಿಖಿತ ಹೇಳಿಕೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಸದರಿಯವರನ್ನು ದೋಷಾರೋಪ ಮುಕ್ತಗೊಳಿಸಲು ಪರಿಗಣಿಸಬಹುದಾದಂತಹ ಯಾವುದೇ ಪೂರಕ ಅಂಶ/ದಾಖಲೆಗಳು ಕಂಡುಬಾರದೇ ಇರುವುದರಿಂದ ಹಾಗೂ ಅವರ ವಿರುದ್ಧದ ಆರೋಪಗಳು ಗಂಭೀರ ಸ್ವರೂಪದವುಗಳಾಗಿರುವುದರಿಂದ ಆಪಾದಿತರ ವಿರುದ್ಧ ಮಾಡಲಾದ ಆರೋಪಗಳ ಸತ್ಯಾ-ಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, **ಶ್ರೀ ಸಿ.ಆರ್ ಬೆನಕನಹಳ್ಳಿ,** ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ಪ್ರಕರಣದ ವಿಚಾರಣಾಧಿಕಾರಿಯನ್ನಾಗಿ ಮತ್ತು **ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕಲಬುರಗಿ** ಇವರನ್ನು ಪ್ರಕರಣದ ಮಂಡನಾಧಿಕಾರಿಯಾಗಿ ನೇಮಕ ಮಾಡಲು ತೀರ್ಮಾನಿಸಿದ್ದರಿಂದ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 130 ವಿಸೇಬಿ 2022, ಬೆಂಗಳೂರು, ದಿನಾಂಕ:23.08.2022</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, **ಶ್ರೀ ಪ್ರಭು ಸಿ ಮಾನೆ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಜೇವರ್ಗಿ (ಮೂಲತಃ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅಧಿಕಾರಿ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2)ರ ಪ್ರಕಾರ ಶ್ರೀ ಸಿ.ಆರ್ ಬೆನಕನಹಳ್ಳಿ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ನಿಯಮ 11(5)(ಸಿ)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕಲಬುರಗಿ ಇವರನ್ನು ಮಂಡನಾಧಿಕಾರಿಯಾಗಿ** ನೇಮಿಸಿದೆ.

--3

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-11(1) ರಿಂದ 11(18)ರವರೆಗೆ ನಿಗದಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಆಪಾದಿತರ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ/ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ 04 (ನಾಲ್ಕು) ತಿಂಗಳೊಳಗಾಗಿ ಪ್ರಕರಣದ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ **ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ/11/ಸೇಇವಿ/2019, ದಿನಾಂಕ:24.04.2019** ರನ್ವಯ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
23/08/2022
(ಬಾಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ. ಐ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು-560001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ.
4. ಶ್ರೀ ಸಿ.ಆರ್ ಬೆನಕನಹಳ್ಳಿ ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.1319, 11ನೇ ಮೈನ್, ಜುಡೀಷಿಯಲ್ ಲೇಔಟ್, ಜಿ.ಕೆ.ವಿ.ಕೆ, ಬೆಂಗಳೂರು-560065 ಮೊ.9845899050.
5. ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕಲಬುರಗಿ (ಮಂಡನಾಧಿಕಾರಿ).
   **(ತಕ್ಷಣ ಪ್ರಕರಣದ ಎಲ್ಲಾ ದಾಖಲೆಗಳೊಂದಿಗೆ ವಿಚಾರಣಾಧಿಕಾರಿಗಳನ್ನು ಖುದ್ದು ಭೇಟಿ ಮಾಡಿ ಇಲಾಖಾ ವಿಚಾರಣೆ ಪ್ರಾರಂಭಿಸತಕ್ಕದ್ದು. ವಿಚಾರಣಾ ವರದಿ ಸಲ್ಲಿಸಲು ಗರಿಷ್ಠ ನಾಲ್ಕು (04) ತಿಂಗಳಿಗಿಂತ ಹೆಚ್ಚು ವಿಳಂಬವಾದಲ್ಲಿ ತಮ್ಮನ್ನೆ ನೇರ ಹೊಣೆ ಮಾಡಲಾಗುವುದು).**
6. ಆಪಾದಿತರಿಗೆ- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಕಲಬುರಗಿ ಇವರ ಮುಖಾಂತರ.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು:-</u>
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಉಪ ಕಾರ್ಯದರ್ಶಿ(ಆಡಳಿತ-2), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.